ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ

("ವಿ ಟಿ ಯು ಅಧಿನಿಯಮ ೧೯೯೪" ರ ಅಡಿಯಲ್ಲಿ ಕರ್ನಾಟಕ ಸರ್ಕಾರದಿಂದ ಸ್ಥಾಪಿತವಾದ ರಾಜ್ಯ ವಿಶ್ವವಿದ್ಯಾಲಯ)

**Visvesvaraya Technological University**

(State University of Government of Karnataka Established as per the VTU Act, 1994)

"Jnana Sangama" Belagavi-590018, Karnataka, India

**Dr. Prasad B. Rampure**, M.E., Ph.D., Registrar

Phone: (0831) 2498100

Fax : (0831) 2405467

Ref: VTU/Aca/2026-27/ 993 Date: 3 JUN 2026

## ಸುತ್ತೋಲೆ

ವಿಷಯ: ತಜ್ಞರ ಸಮಿತಿಯ ತಾಂತ್ರಿಕ ಶಿಕ್ಷಣದಲ್ಲಿ ಸುಧಾರಣೆ ತರಲು ನೀಡಿರುವ ಸೂಕ್ತ ಶಿಫಾರಸ್ಸುಗಳನ್ನು ಜಾರಿಗೆ ತರುವ ಕುರಿತು...

ಉಲ್ಲೇಖ: 1. ಸರ್ಕಾರದ ಆದೇಶ ಸಂಖ್ಯೆ: ಇಡಿ 42 ಟೀಇಸಿ 2026 ಬೆಂಗಳೂರು, ದಿನಾಂಕ: 02.05.2026

2. ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ: 02.06.2026

ಈ ಮೇಲ್ಕಂಡ ವಿಷಯ ಹಾಗು ಉಲ್ಲೇಖಕ್ಕೆ ಸಂಬಂಧಿಸಿದಂತೆ, ರಾಜ್ಯ ಸರ್ಕಾರದ ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿನ ತಾಂತ್ರಿಕ ಶಿಕ್ಷಣದಲ್ಲಿ ಅಗತ್ಯ ಸುಧಾರಣೆಗಳನ್ನು ತರುವ ಕುರಿತು ಸರ್ಕಾರಕ್ಕೆ ಸೂಕ್ತ ಶಿಫಾರಸ್ಸುಗಳನ್ನು ಸಲ್ಲಿಸಲು ರಚಿಸಲಾದ ಡಾ॥ ಎಸ್. ಸಡಗೋಪನ್, ನಿವೃತ್ತ ನಿರ್ದೇಶಕರು, IITB, ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿನ ತಜ್ಞರ ಸಮಿತಿಯ ಶಿಫಾರಸ್ಸುಗಳನ್ನು ಸರ್ಕಾರವು ಪರೀಶಿಲಿಸಿ ಹೊರಡಿಸಲಾದ ಆದೇಶ ಸಂಖ್ಯೆ: ಇಡಿ 42 ಟೀಇಸಿ 2026 ಬೆಂಗಳೂರು, ದಿನಾಂಕ: 02.05.2026 ನ್ನು ಈ ಸುತ್ತೋಲೆಯೊಂದಿಗೆ ಲಗತ್ತಿಸಲಾಗಿದೆ.

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಅಭಿಯಾಂತ್ರಿಕ/ತಾಂತ್ರಿಕ (ಘಟಕ/ಸಂಯೋಜಿತ/ಸ್ವಾಯತ್ತ) ಮಹಾವಿದ್ಯಾಲಯಗಳು ಸದರಿ ಸುತ್ತೋಲೆಯಲ್ಲಿರುವ ಅಂಶಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಈ ಮೂಲಕ ಸೂಚಿಸಲಾಗಿದೆ.

**ಅಡಕ: ಮೇಲಿನಂತೆ**

03/06/26

ಕುಲಸಚಿವರು

ಇವರಿಗೆ,

ಪ್ರಾಂಶುಪಾಲರು, ವಿ.ತಾ.ವಿ. ಬೆಳಗಾವಿಯ ಅಧೀನಕ್ಕೊಳಪಡುವ ಎಲ್ಲಾ ಅಭಿಯಾಂತ್ರಿಕ/ತಾಂತ್ರಿಕ (ಘಟಕ/ಸಂಯೋಜಿತ/ಸ್ವಾಯತ್ತ) ಮಹಾವಿದ್ಯಾಲಯಗಳು.

ಪ್ರತಿಯನ್ನು ಮಾಹಿತಿಗಾಗಿ:

1. ಮಾನ್ಯ ಕುಲಪತಿಗಳ ಕಾರ್ಯದರ್ಶಿಗಳು ಮುಖಾಂತರ ಮಾನ್ಯ ಕುಲಪತಿಗಳು ವಿತಾವಿ, ಬೆಳಗಾವಿ, ಇವರಿಗೆ.
2. ಮಾನ್ಯ ಕುಲಸಚಿವರು, ವಿತಾವಿ, ಬೆಳಗಾವಿ, ಇವರಿಗೆ.
3. ಪ್ರಾದೇಶಿಕ ನಿರ್ದೇಶಕರು, ಬೆಳಗಾವಿ, ಕಲಬುರಗಿ, ಮೈಸೂರು, ಮುದ್ದೇನಹಳ್ಳಿ, ತಳಕಲ್ ಸ್ನಾತಕೋತ್ತರ ಕೇಂದ್ರ, ವಿತಾವಿ.
4. ನಿರ್ದೇಶಕರು (ಪ್ರಭಾರಿ), ITI SMU, ವಿತಾವಿ, ಬೆಳಗಾವಿ ಇವರಿಗೆ ಸದರಿ ಸುತ್ತೋಲೆಯನ್ನು ವಿ.ತಾ.ವಿ. ಯ ವೆಬ್ ಸೈಟನಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.
5. ಕಛೇರಿ ಪ್ರತಿ

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ತಜ್ಞರ ಸಮಿತಿಯು ತಾಂತ್ರಿಕ ಶಿಕ್ಷಣದಲ್ಲಿ ಸುಧಾರಣೆ ತರಲು ನೀಡಿರುವ ಸೂಕ್ತ ಶಿಫಾರಸ್ಸುಗಳನ್ನು ಜಾರಿಗೆ ತರುವ ಕುರಿತು.

**ಓದಲಾಗಿದೆ:** 1. ಸರ್ಕಾರದ ಆದೇಶ ಸಂಖ್ಯೆ:ಇಡಿ 42 ಟಿಇಸಿ 2026, ದಿನಾಂಕ:03.02.2026.
2. ತಜ್ಞರ ಸಮಿತಿಯು ತಾಂತ್ರಿಕ ಶಿಕ್ಷಣದಲ್ಲಿ ಸುಧಾರಣೆ ತರಲು ನೀಡಿರುವ ಸೂಕ್ತ ಶಿಫಾರಸ್ಸುಗಳು.

-*-*-*-*-

**ಪ್ರಸ್ತಾವನೆ:-**

ರಾಜ್ಯದಲ್ಲಿ 2025–26ನೇ ಶೈಕ್ಷಣಿಕ ಸಾಲಿನಲ್ಲಿ Karnataka Examinations Authority ಮುಖಾಂತರ ಇಂಜಿನಿಯರಿಂಗ್ ಪ್ರವೇಶಾತಿ ಪ್ರಕ್ರಿಯೆಯಲ್ಲಿ ಸುಮಾರು 9000ಕ್ಕೂ ಅಧಿಕ ಕಂಪ್ಯೂಟರ್ ಸೈನ್ಸ್ ಹಾಗೂ ಸಂಬಂಧಿತ ವಿಭಾಗಗಳ ಸೀಟುಗಳು ಭರ್ತಿಯಾಗದೆ ಉಳಿಯುತ್ತಿದ್ದು, ಇತ್ತೀಚಿನ ವರ್ಷಗಳಲ್ಲಿ ಈ ವಿಭಾಗಗಳಲ್ಲಿ ಉತ್ತೀರ್ಣರಾಗುವ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಿದರೂ, ನಿರೀಕ್ಷಿತ ಮಟ್ಟದಲ್ಲಿ ಉದ್ಯೋಗಾವಕಾಶಗಳು ದೊರಕದೆ ನಿರುದ್ಯೋಗ ಸಮಸ್ಯೆ ಹೆಚ್ಚುತ್ತಿದೆ. ಇದಕ್ಕೆ ವಿರುದ್ಧವಾಗಿ, ಮೆಕ್ಯಾನಿಕಲ್, ಸಿವಿಲ್ ಹಾಗೂ ಎಲೆಕ್ಟ್ರಿಕಲ್ ಮೊದಲಾದ ಮೂಲ ಇಂಜಿನಿಯರಿಂಗ್ ಕೋರ್ಸ್‌ಗಳಲ್ಲಿ ಪ್ರವೇಶಾತಿ ಗಣನೀಯವಾಗಿ ಕುಸಿದಿದ್ದು, ಕೆಲವು ಸಂಸ್ಥೆಗಳಲ್ಲಿ ಈ ಕೋರ್ಸ್‌ಗಳು ಮುಚ್ಚುವ ಹಂತಕ್ಕೆ ತಲುಪಿವೆ. ಇಂಜಿನಿಯರಿಂಗ್ ಪದವೀಧರರಲ್ಲಿ ಅಂದಾಜು ಶೇ.17ರಷ್ಟು ಮಂದಿಗೆ ಮಾತ್ರ ಉದ್ಯೋಗ ದೊರಕುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದ್ದು, ತಾಂತ್ರಿಕ ಶಿಕ್ಷಣ ಕ್ಷೇತ್ರದಲ್ಲಿ ಉಂಟಾಗಿರುವ ಸ್ಥಿತಿಯನ್ನು ಪರಿಗಣಿಸಿ, ಮೂಲ ಇಂಜಿನಿಯರಿಂಗ್ ಕೋರ್ಸ್‌ಗಳನ್ನು ಪುನಶ್ಚೇತನಗೊಳಿಸಿ ಅವುಗಳನ್ನು ಉದ್ಯೋಗೋನ್ಮುಖ ಹಾಗೂ ಆಕರ್ಷಕವಾಗಿಸಲು ಅಗತ್ಯ ಕ್ರಮಗಳನ್ನು ಸಮಗ್ರವಾಗಿ ಪರಿಶೀಲಿಸುವ ನಿಟ್ಟಿನಲ್ಲಿ ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿನ ತಾಂತ್ರಿಕ ಶಿಕ್ಷಣದಲ್ಲಿ ಅಗತ್ಯ ಸುಧಾರಣೆಗಳ ಕುರಿತು ಸರ್ಕಾರಕ್ಕೆ ಸೂಕ್ತ ಶಿಫಾರಸ್ಸುಗಳನ್ನು ಸಲ್ಲಿಸಲು ಡಾ. ಎಸ್. ಸಡಗೋಪನ್, ನಿವೃತ್ತ ನಿರ್ದೇಶಕರು, IITB, ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ತಜ್ಞರ ಸಮಿತಿಯನ್ನು ರಚಿಸಲಾಗಿತ್ತು.

ಮೇಲೆ ಓದಲಾದ (2) ರಲ್ಲಿ ತಜ್ಞರ ಸಮಿತಿಯು ತಾಂತ್ರಿಕ ಶಿಕ್ಷಣದಲ್ಲಿ ಸುಧಾರಣೆ ತರಲು ವಿವರವಾದ ವರದಿಯೊಂದಿಗೆ ಸರ್ಕಾರಕ್ಕೆ ಸೂಕ್ತ ಶಿಫಾರಸ್ಸುಗಳನ್ನು ನೀಡಿರುತ್ತದೆ. ಸದರಿ ಶಿಫಾರಸ್ಸುಗಳನ್ನು ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಇಡಿ 42 ಟಿಇಸಿ 2026
## ಬೆಂಗಳೂರು, ದಿನಾಂಕ:02-05-2026

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಪ್ರಸ್ತುತ ತಾಂತ್ರಿಕ ಶಿಕ್ಷಣ ಕ್ಷೇತ್ರದಲ್ಲಿ ಉಂಟಾಗಿರುವ ಪರಿಸ್ಥಿತಿಯನ್ನು ಪರಿಗಣಿಸಿ, ಕೈಗೊಳ್ಳಬೇಕಾದ ಕ್ರಮಗಳ ಕುರಿತು ತಜ್ಞರ ಸಮಿತಿಯು ನೀಡಿರುವ ಶಿಫಾರಸ್ಸುಗಳನ್ನು ಪರಿಶೀಲಿಸಿ ಕೆಳಕಂಡ ಕ್ರಮಗಳನ್ನು ಅನುಷ್ಠಾನಗೊಳಿಸಲು ಆದೇಶಿಸಿದೆ.

1. ಯಾವುದೇ ಖಾಸಗಿ ವಿಶ್ವವಿದ್ಯಾಲಯ/ಖಾಸಗಿ ಇಂಜಿನಿಯರಿಂಗ್ ಕಾಲೇಜು ಪ್ರಾರಂಭದಲ್ಲಿ ವಿದ್ಯಾರ್ಥಿ ಪ್ರಮಾಣದ ಮಂಜೂರಾತಿಯನ್ನು ನಿರ್ದಿಷ್ಟ ಕೋರ್ಸ್/ವಿಭಾಗಕ್ಕೆ 60 ಪ್ರವೇಶಾತಿಗೆ ಸೀಮಿತಗೊಳಿಸುವುದು.
2. ವರ್ಷಕ್ಕೆ 60 ವಿದ್ಯಾರ್ಥಿ ಪ್ರಮಾಣದ ಹೆಚ್ಚಳಕ್ಕೆ ಅನುಮತಿಸಲಾಗುವುದು ಹಾಗೂ ಪ್ರಾರಂಭದ 4 ವರ್ಷಗಳ ಅವಧಿಗೆ ಗರಿಷ್ಠ 180 ಸೀಟುಗಳಿಗೆ ಸೀಮಿತಗೊಳಿಸುವುದು.

3. ರಾಷ್ಟ್ರೀಯ ಮಾನ್ಯತಾ ಮಂಡಳಿಯಿಂದ (NBA) ಕೋರ್ಸ್ / ವಿಭಾಗವು ಮಾನ್ಯತೆ ಪಡೆದಿದ್ದರೆ ಖಾಸಗಿ ವಿಶ್ವವಿದ್ಯಾಲಯಗಳು ಮತ್ತು ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳು ಪ್ರವೇಶಾತಿಯನ್ನು ವರ್ಷಕ್ಕೆ 60 ರಷ್ಟು ಹೆಚ್ಚಿಸಬಹುದು. NBA ಮಾನ್ಯತೆಯ ಜೊತೆಗೆ ಖಾಸಗಿ ವಿಶ್ವವಿದ್ಯಾಲಯಗಳು NAAC ಮಾನ್ಯತೆಯನ್ನು ಸಹ ಪಡೆಯಬೇಕು. ಯಾವುದೇ ಸಂದರ್ಭಗಳಲ್ಲಿ ಕೋರ್ಸ್ / ವಿಭಾಗದ ಒಟ್ಟು ವಿದ್ಯಾರ್ಥಿ ಪ್ರಮಾಣವು 300 ಕ್ಕಿಂತ ಹೆಚ್ಚಿರಬಾರದು.

4. ಯಾವುದೇ ಸಮಯದಲ್ಲಿ ಖಾಸಗಿ ವಿಶ್ವವಿದ್ಯಾಲಯಗಳು ಮತ್ತು ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳು 5 ಕ್ಕಿಂತ ಹೆಚ್ಚು ಕಂಪ್ಯೂಟರ್ ಸಂಬಂಧಿತ ಕೋರ್ಸ್‌ಗಳು/ವಿಭಾಗಗಳನ್ನು ಪ್ರಾರಂಭಿಸುವಂತಿಲ್ಲ.

5. ಖಾಸಗಿ ವಿಶ್ವವಿದ್ಯಾಲಯಗಳು ಮತ್ತು ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳು ಕಂಪ್ಯೂಟರ್ ಸಂಬಂಧಿತ ಎಲ್ಲಾ ಕೋರ್ಸ್‌ಗಳು/ವಿಭಾಗಗಳ ಒಟ್ಟಾರೆ ವಿದ್ಯಾರ್ಥಿ ಪ್ರಮಾಣ 900 ಕ್ಕಿಂತ ಹೆಚ್ಚಿರಬಾರದು.

6. ಈ ಮೇಲಿನ ಷರತ್ತುಗಳು ಇಂಜಿನಿಯರಿಂಗ್/ತಂತ್ರಜ್ಞಾನ ಕಾರ್ಯಕ್ರಮಗಳ ಎಲ್ಲಾ ಕೋರ್ಸ್‌ಗಳು/ವಿಭಾಗಗಳಿಗೆ ಅನ್ವಯಿಸುತ್ತದೆ.

7. ಅಸ್ತಿತ್ವದಲ್ಲಿರುವ ಖಾಸಗಿ ವಿಶ್ವವಿದ್ಯಾಲಯಗಳು ಮತ್ತು ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳ ನಿರ್ದಿಷ್ಟ ಕೋರ್ಸ್ / ವಿಭಾಗದಲ್ಲಿ 300 ಕ್ಕಿಂತ ಹೆಚ್ಚು ಪ್ರವೇಶವನ್ನು ಹೊಂದಿರುವವರು ಸಹ ಸದರಿ ನಿಯಮಗಳನ್ನು ಪ್ರಕಟಿಸಿದ ದಿನಾಂಕದಿಂದ 2 ವರ್ಷಗಳ ಅವಧಿಯೊಳಗೆ ಕೋರ್ಸ್‌ಗಳು / ವಿಭಾಗಗಳಿಗೆ NBA ಮಾನ್ಯತೆಯನ್ನು ಪಡೆಯಬೇಕು. ತಪ್ಪಿದ್ದಲ್ಲಿ ಉನ್ನತ ಶಿಕ್ಷಣ ಇಲಾಖೆಯು ನಿಯಮಾವಳಿಗಳ ಅನುಸಾರ ಸೀಟ್‌ಗಳನ್ನು ಕಡಿತಗೊಳಿಸಲಾಗುವುದು.

8. ಉನ್ನತ ಶಿಕ್ಷಣದಲ್ಲಿ ಗುಣಮಟ್ಟವನ್ನು ಕಾಯ್ದುಕೊಳ್ಳುವ ನಿಟ್ಟಿನಲ್ಲಿ ಉನ್ನತ ಶಿಕ್ಷಣ ಇಲಾಖೆಯು ಎರಡು ವರ್ಷಗಳಿಗೊಮ್ಮೆ ತಪಾಸಣೆಯನ್ನು ಕೈಗೊಳ್ಳುವುದು ಮತ್ತು ಅಗತ್ಯವಿದ್ದಲ್ಲಿ ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು ರಚಿಸುವ ಸಮಿತಿಯಿಂದ ಅನಿರೀಕ್ಷಿತ ತಪಾಸಣೆಯನ್ನು ಕೈಗೊಳ್ಳುವುದು.

9. ಖಾಸಗಿ ವಿಶ್ವವಿದ್ಯಾಲಯಗಳು/ಖಾಸಗಿ ಸಂಸ್ಥೆಗಳು ವಿಶ್ವವಿದ್ಯಾಲಯ/ಸಂಸ್ಥೆಗೆ ಸಂಬಂಧಿಸಿದ ತಮ್ಮ ಎಲ್ಲಾ ಮಾಹಿತಿಯನ್ನು ಕಡ್ಡಾಯವಾಗಿ ಸಂಸ್ಥೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.

10. ವಿಶ್ವವಿದ್ಯಾಲಯಗಳು/ಸಂಸ್ಥೆಗಳು ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿಗೆ ಆಗಿಂದಾಗ್ಗೆ ಹೊಸದಾಗಿ ಸೇರುವ/ಬಿಡುವ ಅಧ್ಯಾಪಕರ ಎಲ್ಲಾ ಮಾಹಿತಿಗಳನ್ನು ಒದಗಿಸುವುದು.

11. Artificial Intelligence (A.I.) ಯಲ್ಲಿ ಸಿವಿಲ್, ಮೆಕ್ಯಾನಿಕಲ್ ಮತ್ತು ಎಲೆಕ್ಟ್ರಾನಿಕ್ ವಿಭಾಗಗಳ ಪಠ್ಯಕ್ರಮವನ್ನು ಪರಿಷ್ಕರಿಸಿ ಅಳವಡಿಸಿಕೊಳ್ಳುವ ಕುರಿತು ಸೂಕ್ತ ಕ್ರಮವಹಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರೂಪ ಪಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಉನ್ನತ ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ)

**ಇವರಿಗೆ:-**

1. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು,

2. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು,ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಮಲ್ಲೇಶ್ವರಂ, ಬೆಂಗಳೂರು.
4. ಕುಲಪತಿಗಳು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ.
5. ನಿರ್ದೇಶಕರು, ಯುವಿಸಿಇ, ಬೆಂಗಳೂರು.
6. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಬೆಂಗಳೂರು.
7. ಕುಲಪತಿಗಳು, ಎಲ್ಲಾ ಸರ್ಕಾರಿ ಹಾಗೂ ಖಾಸಗಿ ವಿಶ್ವವಿದ್ಯಾಲಯಗಳು.
8. ಪ್ರಾಂಶುಪಾಲರು, ಎಲ್ಲಾ ಸರ್ಕಾರಿ / ಅನುದಾನಿತ / ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳು ( ಕುಲಸಚಿವರು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಇವರ ಮೂಲಕ)

**ಪ್ರತಿಗಳು**

1. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು
2. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿ, ತಾಂತ್ರಿಕ ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ & ಯೋಜನೆ), ಬೆಂಗಳೂರು ಇವರ ಆಪ್ತ ಸಹಾಯಕರು
4. ಶಾಖಾ ರಕ್ಷಾ ಕಡತ/ಕಛೇರಿ ಪ್ರತಿ.